## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **379** |
| **ಮಾನ್ಯ ಸದಸ್ಯರ ಹೆಸರು** | ಶ್ರೀ ಯು.ಬಿ.ವೆಂಕಟೇಶ್ (ನಾಮ ನಿರ್ದೇಶನ) |
| **ಉತ್ತರಿಸಬೇಕಾದ ದಿನಾಂಕ** | 19-02-2024 |
| **ಉತ್ತರಿಸುವವರು** | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ 16 ಸಾವಿರಕ್ಕೂ ಹೆಚ್ಚು ವೈದ್ಯಕೀಯ ಮತ್ತು ಅರೆ ವೈದ್ಯಕೀಯ ಹುದ್ದೆಗಳು ಖಾಲಿ ಇರುವ ಬಗ್ಗೆ ಎಫ್.ಐ.ಸಿ.ಸಿ.ಐ ರವರು ನೀಡಿರುವ ವರದಿ ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ | ಸಿಬ್ಬಂದಿ ಕೊರತೆ ಬಗ್ಗೆ ರಾಜ್ಯ ಹೈಕೋರ್ಟ್ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಗೆ ನೋಟೀಸ್ ಜಾರಿಗೊಳಿಸಿರುವ ಬಗ್ಗೆ ಸರ್ಕಾರದ ವಿವರ ಏನು; | ಇಲಾಖೆಯ ಸಿಬ್ಬಂದಿ ಕೊರತೆ ಬಗ್ಗೆ ಯಾವುದೇ ನೋಟೀಸ್ ಬಂದಿರುವುದಿಲ್ಲ. |
| ಇ | ಸಾರ್ವಜನಿಕ ಹಿತದೃಷ್ಟಿಯಿಂದ ಕೊರತೆಯಿರುವ ವೈದ್ಯಕೀಯ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದೇ? | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡಲು ಈ ಕೆಳಕಂಡಂತೆ ಕ್ರಮಕೈಗೊಳ್ಳಲಾಗುತ್ತಿದೆ.<br><br>1. ಸರ್ಕಾರದ ಆದೇಶ ಸಂಖ್ಯೆ:ಆಕುಕ 619 ಹೆಚ್‌ಎಸ್‌ಹೆಚ್ 2022, ದಿ:17.01.2024ರಲ್ಲಿ ಆಕುಕ ಇಲಾಖೆಯಲ್ಲಿ ಖಾಲಿ ಇರುವ 337 ತಜ್ಞ ವೈದ್ಯರನ್ನು ಮತ್ತು 250 ಸಾ.ಕ.ವೈದ್ಯಾಧಿಕಾರಿಗಳನ್ನು ಕೆಲವು ಷರತ್ತುಗಳಿಗೊಳಪಟ್ಟು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>2. ಸರ್ಕಾರದ ಪತ್ರ ಸಂಖ್ಯೆ:ಆಕುಕ 453 ಹೆಚ್‌ಎಸ್‌ಹೆಚ್ 2022, ದಿನಾಂಕ:13.12.2022ರಲ್ಲಿ ರಾಜ್ಯದ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳಲ್ಲಿನ ಗ್ರಾಮೀಣ ಪ್ರದೇಶಗಳ ಪ್ರಾ.ಆ.ಕೇಂದ್ರ ಮತ್ತು ಸ.ಆ.ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಚಾಲ್ತಿಯಲ್ಲಿರುವ ಸರ್ಕಾರದ ಆದೇಶಗಳಡಿ ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಾಮಾನುಸಾರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>3. ಇಲಾಖೆಯ ಮುಖಾಂತರ ಸೇವಾನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ ತಜ್ಞ ವೈದ್ಯರನ್ನು ತಜ್ಞತೆ ಹುದ್ದೆಗೆ ನೇಮಿಸಲಾಗುತ್ತಿದೆ.<br><br>4. ಸ್ನಾತಕೋತ್ತರ ವ್ಯಾಸಂಗವನ್ನು ಪೂರೈಸಿ 1 ವರ್ಷದ ಕಡ್ಡಾಯ ಸೇವೆಗಾಗಿ ಬರುವ ವೈದ್ಯ ಅಭ್ಯರ್ಥಿ/ತಜ್ಞ ವೈದ್ಯ ಅಭ್ಯರ್ಥಿಗಳನ್ನು ನೇಮಕ ಮಾಡುವ ಮೂಲಕ ವೈದ್ಯರ/ತಜ್ಞರುಗಳ ಕೊರತೆಯನ್ನು ನೀಗಿಸಲು ಕ್ರಮಕೈಗೊಳ್ಳಲಾಗುತ್ತಿದೆ |

**HFW 05 HSD 2024**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.**